# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 05.02.2011**

## *ರಸ್ತೆ ನಾಮಕರಣ : ಸಾರ್ವಜನಿಕ ಆಕ್ಷೇಪಣೆಗೆ ಆಹ್ವಾನ*

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ನಂ.94ರ ವ್ಯಾಪ್ತಿಯಲ್ಲಿ ಬರುವ ಶೇಷಾದ್ರಿಪುರಂ ಸಿರೂರ್ ಪಾರ್ಕ್ ಆಟದ ಮೈದಾನದಲ್ಲಿ ನೂತನವಾಗಿ ನಿರ್ಮಿಸಿರುವ ಒಳಾಂಗಣ ಕ್ರೀಡಾಂಗಣಕ್ಕೆ ***"ಶ್ರೀ ಆರ್. ಗುಂಡೂರಾವ್ ಕ್ರೀಡಾ ಸಂಕೀರ್ಣ"*** ಎಂದು ನಾಮಕರಣ ಮಾಡಲು ದಿನಾಂಕ: 13.01.2011 ರಂದು ನಡೆದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯಲ್ಲಿ ನಿರ್ಣಯಿಸಲಾಗಿದೆ.

ಅದೇ ರೀತಿ ಪಾಲಿಕೆಯ ವಾರ್ಡ್ ನಂ.154ರ ವ್ಯಾಪ್ತಿಯಲ್ಲಿ ಬರುವ ತ್ಯಾಗರಾಜನಗರ 3ನೇ ಬ್ಲಾಕ್, 6ನೇ ಮುಖ್ಯರಸ್ತೆಯಲ್ಲಿ ದತ್ತಾತ್ರೇಯ ದೇವಸ್ಥಾನದ ಎದುರು ಭಾಗದಲ್ಲಿರುವ ಆಟದ ಮೈದಾನಕ್ಕೆ ***"ಡಾ// ಎಂ.ಕೆ. ಪಾಂಡುರಂಗ ಶೆಟ್ಟಿ"*** ಎಂದು ನಾಮಕರಣ ಮಾಡಲು ದಿನಾಂಕ: 13.01.2011 ರಂದು ನಡೆದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯಲ್ಲಿ ನಿರ್ಣಯಿಸಲಾಗಿದೆ.

ಆದುದರಿಂದ ಸದರಿ ವಿಷಯಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕ ಆಕ್ಷೇಪಣೆಗಳಿದ್ದಲ್ಲಿ ಈ ಪತ್ರಿಕಾ ಪ್ರಕಟಣೆ ಹೊರಡಿಸಲಾದ ದಿನಾಂಕದಿಂದ 30 ದಿನದೊಳಗೆ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ನರಸಿಂಹರಾಜ ಚೌಕ, ಬೆಂಗಳೂರು-02, ಇವರಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ತಿಳಿಸಲಾಗಿದೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**